ಈದ್ಗಾ ಮೈದಾನ ವಿವಾದ

ಕಾರ್ಯಕ್ರಮಗಳನ್ನು ಆಯೋಜಿಸಲು ಸಂಘಪರಿವಾರದಿಂದ ಬಿಬಿಎಂಪಿಗೆ ಅರ್ಜಿ

ಬೆಂಗಳೂರು, ಜೂ.9: ಸುಪ್ರೀಂಕೋರ್ಟ್ ಆದೇಶದ ಬಳಿಕ ಇದೇ ಮೊದಲ ಬಾರಿಗೆ ನಗರದ ಚಾಮರಾಜಪೇಟೆಯಲ್ಲಿರುವ ಈದ್ಗಾ ಮೈದಾನದ ಒಡೆತನದ ವಿವಾದ ಸೃಷ್ಟಿಯಾಗಿದ್ದು, ಇದರ ಬೆನ್ನಲ್ಲೇ ಶ್ರೀರಾಮಸೇನೆ, ವಿಶ್ವಸ್ಥ ಸಾಧನಾ ಮಂಡಳಿ, ವಂದೇ ಮಾತರಂ ಸಮಾಜ ಸಂಸ್ಥೆಗಳು ಕಾರ್ಯಕ್ರಮ ಆಯೋಜಿಸಲು ಅನುಮತಿಯನ್ನು ಕೋರಿವೆ.

ಆದರೆ ವಕ್ಫ್ ಬೋರ್ಡ್‌ನ ಅಧ್ಯಕ್ಷ ಮುಹಮ್ಮದ್ ಶಾಫಿ ಸಾಅದಿ ಅವರು ಸುಪ್ರೀಂ ತೀರ್ಪನ್ನು ಹಾಗೂ ಕೆಲ ದಾಖಲೆಗಳನ್ನು ಮುಂದಿಟ್ಟುಕೊಂಡು, ಈದ್ಗಾ ಮೈದಾನವು ವಕ್ಫ್ ಬೋರ್ಡ್ ಆಸ್ತಿ ಎಂದು ಘೋಷಿಸಿದ್ದಾರೆ. ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಈದ್ಗಾ ಮೈದಾನವು ಆಟದ ಮೈದಾನ ಎಂದು ಬಿಬಿಎಂಪಿ ದಾಖಲೆಗಳಲ್ಲಿ ಇದೆ ಎಂದು ತಿಳಿಸಿದ್ದಾರೆ. ಈ ಹೇಳಿಕೆಗಳು ಗೊಂದಲವನ್ನು ಸೃಷ್ಟಿಸಿದ್ದು, ಕಾರ್ಯಕ್ರಮಗಳಿಗೆ ನೀಡುವ ಅನುಮತಿಯನ್ನು ಬಿಬಿಎಂಪಿ ಇನ್ನೂ ಪರಿಶೀಲನಾ ಹಂತದಲ್ಲಿ ಇರಿಸಿರುವುದು ಬಹಿರಂಗವಾಗಿದೆ.

ಬಿಬಿಎಂಪಿಗೆ ಶ್ರೀರಾಮ ಸೇನೆಯು ಜೂ.21 ರಂದು ಅಂತರ್‌ರಾಷ್ಟ್ರೀಯ ಯೋಗ ದಿನಾಚರಣೆಯನ್ನು ಈದ್ಗಾ ಮೈದಾನದಲ್ಲಿ ಆಚರಣೆ ಮಾಡಲು ಅನುಮತಿ ಕೋರಿ ಅರ್ಜಿ ಸಲ್ಲಿಸಿದೆ. ವಿಶ್ವಸ್ಥ ಸಾಧನಾ ಮಂಡಳಿ ಮತ್ತು ವಂದೇ ಮಾತರಂ ಸಮಾಜ ಸಂಸ್ಥೆಗಳು ಈ ವರ್ಷದ ಸ್ವಾತಂತ್ರ್ಯೋತ್ಸವವನ್ನು ಆ.14 ಮತ್ತು 15ರಂದು ಆಚರಣೆ ಮಾಡಲು ಅನುಮತಿ ಕೋರಿವೆ. ಅರ್ಜಿಗಳನ್ನು ಪರಿಶೀಲನೆ ಮಾಡಲಾಗುತ್ತಿದೆ ಎಂದು ಬಿಬಿಎಂಪಿ ತಿಳಿಸಿದೆ.

ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವು ನಿಶ್ಚಿತ: ಯು.ಟಿ.ಖಾದರ್

ಬೆಂಗಳೂರು, ಜೂ.9: ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಾದ ಜೈರಾಮ್ ರಮೇಶ್ ಹಾಗೂ ಮನ್ಸೂರ್ ಅಲಿ ಖಾನ್ ಅವರ ಗೆಲುವು ನಿಶ್ಚಿತವಾಗಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ಉಪ ನಾಯಕ ಯು.ಟಿ.ಖಾದರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಗುರುವಾರ ನಗರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜೆಡಿಎಸ್ ಪಕ್ಷ ತನ್ನ ಅಭ್ಯರ್ಥಿಯನ್ನು ಘೋಷಿಸುವ ಮುನ್ನವೇ ಕೇಂದ್ರದ ಮಾಜಿ ಸಚಿವ ಡಾ.ಕೆ.ರಹ್ಮಾನ್ ಖಾನ್ ಹಾಗೂ ನಮ್ಮ ಅಭ್ಯರ್ಥಿ ಮನ್ಸೂರ್ ಅಲಿ ಖಾನ್, ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರನ್ನು ಭೇಟಿಯಾಗಿ ಬೆಂಬಲ ಯಾಚಿಸಿದ್ದಾರೆ ಎಂದರು.

ಆದರೆ, ನಂತರ ಜೆಡಿಎಸ್ ತನ್ನ ಅಭ್ಯರ್ಥಿಯನ್ನು ಪ್ರಕಟಿಸಿದ ಬೆನ್ನಲ್ಲೆ ಬಿಜೆಪಿ ಪಕ್ಷವು ತನ್ನ ಮೂರನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿತು. ಈ ಹಿಂದೆ ಎಚ್.ಡಿ.ದೇವೇಗೌಡರನ್ನು ರಾಜ್ಯಸಭೆಗೆ ಆಯ್ಕೆ ಮಾಡುವ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಬೆಂಬಲ ನೀಡಿದೆ. ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡುವುದು ಜೆಡಿಎಸ್ ಧರ್ಮ ಎಂದು ಖಾದರ್ ಹೇಳಿದರು.

ಕಾಂಗ್ರೆಸ್ ಪಕ್ಷ ಮನ್ಸೂರ್ ಅಲಿ ಖಾನ್ ಅವರನ್ನು 'ಹರಕೆಯ ಕುರಿ' ಮಾಡಿದೆ ಎಂಬ ಆಪಾದನೆ ಸತ್ಯಕ್ಕೆ ದೂರವಾದದ್ದು. ಅಲ್ಪಸಂಖ್ಯಾತರಿಗೆ ಸ್ಥಾನಮಾನ ನೀಡುವ ವಿಚಾರದಲ್ಲಿ ಕಾಂಗ್ರೆಸ್ ಎಂದಿಗೂ ಹಿಂದೆ ಬಿದ್ದಿಲ್ಲ. ಇತ್ತೀಚೆಗೆ ನಡೆದ ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಬಹುದಾಗಿದ್ದ ಎರಡು ಸ್ಥಾನಗಳ ಪೈಕಿ ಒಂದು ಸ್ಥಾನವನ್ನು ಅಬ್ದುಲ್ ಜಬ್ಬಾರ್ ಅವರಿಗೆ ನೀಡಿದೆ ಎಂದು ಅವರು ತಿಳಿಸಿದರು.

ಅಲ್ಪಸಂಖ್ಯಾತರು ಹಾಗೂ ಜಾತ್ಯತೀತತೆ ಬಗ್ಗೆ ಮಾತನಾಡುವ ಜೆಡಿಎಸ್ ನಾಯಕರು ತಮ್ಮ ಕೃತಿಯ ಮೂಲಕವು ಅದನ್ನು ಸಾಬೀತುಪಡಿಸಲಿ. ಜೆಡಿಎಸ್‌ನವರು ಅಲ್ಪಸಂಖ್ಯಾತರ ಬಗ್ಗೆ ಕಾಳಜಿ ಹೊಂದಿದ್ದರೆ ಕುಪೇಂದ್ರ ರೆಡ್ಡಿ ಬದಲಾಗಿ ತಮ್ಮ ಪಕ್ಷಕ್ಕಾಗಿ ಹಲವಾರು ವರ್ಷಗಳಿಂದ ದುಡಿಯುತ್ತಿರುವ ಝಫರುಲ್ಲಾ ಖಾನ್, ಬಿ.ಎಂ.ಫಾರೂಕ್ ಅಥವಾ ಸಿ.ಎಂ.ಇಬ್ರಾಹೀಂ ಅವರನ್ನು ಕಣಕ್ಕಿಳಿಸಬಹುದಾಗಿತ್ತು ಎಂದು ಖಾದರ್ ಹೇಳಿದರು.

ನಮ್ಮ ಅಭ್ಯರ್ಥಿಗಳಾದ ಜೈರಾಮ್ ರಮೇಶ್, ಮನ್ಸೂರ್ ಅಲಿ ಖಾನ್ ಅವರ ಗೆಲುವಿಗಾಗಿ ನಾವು ನಮ್ಮದೆ ಆದ ಚುನಾವಣಾ ತಂತ್ರಗಾರಿಕೆ ರೂಪಿಸಿದ್ದು, ಇಬ್ಬರೂ ಅಭ್ಯರ್ಥಿಗಳು ಗೆಲ್ಲುವುದು ನಿಶ್ಚಿತ ಎಂದರು.

ಬಿಬಿಎಂಪಿ ಚುನಾವಣೆ ಎದುರಿಸಲು 3 ಪಕ್ಷಗಳ ಮೈತ್ರಿಕೂಟ ರಚನೆ

ಬೆಂಗಳೂರು, ಜೂ.9: ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ, ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ(ಕೆಆರ್‌ಎಸ್) ಮತ್ತು ಸಂಯುಕ್ತ ಜನತಾದಳ ಪಕ್ಷಗಳು ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಒಟ್ಟಾಗಿ ಸ್ಪರ್ಧೆ ಮಾಡುವುದಾಗಿ ಘೋಷಣೆ ಮಾಡಿದವು.

ಗುರುವಾರ ಪ್ರೆಸ್‌ಕ್ಲಬ್‌ನಲ್ಲಿ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ ಅಡ್ವೋಕೇಟ್ ತಾಹೇರ್ ಹುಸೇನ್, ಕೆಆರ್‌ಎಸ್ ಪಕ್ಷದ ರಾಜ್ಯಾಧ್ಯಕ್ಷ ರವಿಕೃಷ್ಣಾ ರೆಡ್ಡಿ ಮತ್ತು ಜನತಾದಳ ಸಂಯುಕ್ತ ರಾಜ್ಯಾಧ್ಯಕ್ಷ ಮಹಿಮಾ ಪಟೇಲ್ ಅವರು ಜಂಟಿ ಸುದ್ದಿಗೋಷ್ಠಿಯನ್ನು ಆಯೋಜಿಸಿ, ಮುಂಬರುವ ಚುನಾವಣೆಗಳಲ್ಲಿ ಮೈತ್ರಿಕೂಟದ ಮೂಲಕ ಸ್ಪರ್ಧಿಸಲಾಗುತ್ತದೆ ಎಂದು ತಿಳಿಸಿದರು.

ಈ ಕುರಿತು ಹಲವಾರು ಸುತ್ತಿನ ಮಾತುಕತೆಗಳು ನಡೆದಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹಲವು ಸಮಾನ ಮನಸ್ಕ ಪಕ್ಷಗಳನ್ನು ಈ ಮೈತ್ರಿಕೂಟಕ್ಕೆ ಸೇರಿಸಿಕೊಳ್ಳಲಾಗುವುದು. ಇತರ ಕೆಲವು ಪಕ್ಷಗಳೊಂದಿಗೆ ಮಾತುಕತೆ ಮುಂದುವರಿದಿದೆ. ಮುಂಬರುವ ಬಿಬಿಎಂಪಿ, ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತ್ ಚುನಾವಣೆಗಳಲ್ಲಿ ಸ್ಥಾನ ಹೊಂದಾಣಿಕೆ, ಜಂಟಿ ಪ್ರಚಾರ ಹಾಗೂ ಕನಿಷ್ಠ ಸಾಮಾನ್ಯ ಕಾರ್ಯಕ್ರಮಗಳ ಮೂಲಕ ಈ ಮೈತ್ರಿಕೂಟವನ್ನು ಮುನ್ನಡೆಸಲಾಗುವುದು ಎಂದರು.

ಈ ಮೈತ್ರಿಕೂಟವು ಮುಂಬರುವ ವಿಧಾನಸಭೆ ಮತ್ತು ತದನಂತರದ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ರಚಿಸಲಾಗಿದ್ದು, ರಾಜ್ಯದಲ್ಲಿ ಉತ್ತಮ ಆಡಳಿತವನ್ನು ಸ್ಥಾಪಿಸುವ ನಿಟ್ಟಿನಲ್ಲಿ ಕೆಲಸ ಮಾಡಲಿದೆ ಎಂದು ಮೂರು ಪಕ್ಷದ ನಾಯಕರು ತಿಳಿಸಿದರು.

ನಿಗಮದ ಘಟಕಗಳಲ್ಲಿ ಉಪಕ್ರಮ ಅಳವಡಿಸಿಕೊಂಡವರಿಗೆ ಪ್ರೋತ್ಸಾಹ

ಬೆಂಗಳೂರು, ಜೂ.9: ಕೆಎಸ್ಆರ್‌ಟಿಸಿಯ ಘಟಕಗಳಲ್ಲಿ ಹಾಗೂ ವಿಭಾಗಗಳಲ್ಲಿ ಹೊಸ ಉಪಕ್ರಮಗಳನ್ನು ಅಳವಡಿಕೊಂಡಿರುವ ಸಿಬ್ಬಂದಿಗೆ ಪ್ರೋತ್ಸಾಹಿಸಲು ಅಧಿಕಾರಿಗಳ ಮತ್ತು ಸಿಬ್ಬಂದಿಯ ಪಟ್ಟಿಯನ್ನು ಕಳುಹಿಸುವಂತೆ ನಿಗಮದ ವ್ಯವಸ್ಥಾಪಕರಿಗೆ ಸೂಚಿಸಲಾಗಿದೆ.

ವಿಭಾಗಗಳಲ್ಲಿ ಕೆಲಸ ಮಾಡುತ್ತಿದ್ದು, ವಾಹನ ದುರಸ್ತಿ, ಟೈರ್-ಟ್ಯೂಬ್ ಬಳಕೆ, ಇಂಧನ ಉಳಿತಾಯ, ನೀರಿನ ಕ್ಷಮತೆ ಹೆಚ್ಚಿಸುವುದು, ಸಿಬ್ಬಂದಿಯ ಹಾಜರಾತಿಯಲ್ಲಿ ಪ್ರಗತಿ, ಆರ್ಥಿಕ ಉಳಿತಾಯದಂತಹ ಸಾಧನ ಮಾಡಿದವರು ಈ ಪ್ರೋತ್ಸಾಹಕ್ಕೆ ಅರ್ಹರಾಗಿರುತ್ತಾರೆ. ಪ್ರತಿ ಮೂರು ತಿಂಗಳಿಗೆ ಒಮ್ಮೆ ಕೇಂದ್ರ ಕಚೇರಿ ಮಟ್ಟದಲ್ಲಿ ಸಿಬ್ಬಂದಿಯನ್ನು ಗುರುತಿಸಿ ಗೌರವಿಸಲಾಗುವುದು ಎಂದು ಕೆಎಸ್ಆರ್‌ಟಿಸಿ ಪ್ರಕಟನೆಯಲ್ಲಿ ತಿಳಿಸಿದೆ.

ಕರ್ನಾಟಕ ಸರ್ಕಾರ
ಕಾರ್ಯಪಾಲಕ ಅಭಿಯಂತರವರ ಕಛೇರಿ, ಲೋಕೋಪಯೋಗಿ ಇಲಾಖೆ, ದಾವಣಗೆರೆ ವಿಭಾಗ, ದಾವಣಗೆರೆ.
ಪ್ರಕಟಣೆ ಸಂ: ಎಎಫ್‌ಯು-01/ಚೆಇ/2022-23/604 ದಿನಾಂಕ:-07.06.2022
ಅವಧಿ ವಿಸ್ತರಣೆ ಪ್ರಕಟಣೆ
ವಿಷಯ : ಟೆಂಡರ್ ಅವಧಿ ವಿಸ್ತರಣೆ ಪ್ರಕಟಣೆ ಮಾಡುವ ಬಗ್ಗೆ.
ಉಲ್ಲೇಖ : ಈ ಕಚೇರಿ ಟೆಂಡರ್ ಪ್ರಕಟಣೆ ಸಂಖ್ಯೆ : ಕಾಅ/ದಾವಿದಾ/ಜ.ಎಫ್.ಯು 01/ಚೆಇ/2021-22 ದಿನಾಂಕ: 24.05.2022.
ಈ ಕಚೇರಿ ಪ್ರಕಟಣೆ ಸಂಖ್ಯೆ: ಎಎಫ್‌ಯು-01/2022-23 ದಿನಾಂಕ 24.05.2022ರ ಪ್ರಕಟಣೆಯಲ್ಲಿನ ಕಾಮಗಾರಿಗಳಿಗೆ ಸಂಬಂಧಿಸಿದಂತೆ ದಿನಾಂಕಗಳನ್ನು ಖಾಂತ್ರಿಕ ಕಾರಣಗಳಿಂದ ಈ ಕೆಳಕಂಡಂತೆ ಮುಂದೂಡಲಾಗಿದೆ.

	ಕ್ರ.ಸಂ 03, 04, 06, 14 ಮತ್ತು 16 ಕೆಡಬ್ಲ್ಯೂ-4ರ ಕಾಮಗಾರಿಗಳಿಗೆ
ಟೆಂಡರ್ ಆಕ್ಷೇಪಣೆಗಳಿಗಾಗಿ ನಿಗಧಿಪಡಿಸಿದ ದಿನಾಂಕ :	18.06.2022 ಸಂಜೆ 4.00 ಗಂಟೆಯವರೆಗೆ
ಪ್ರಿಬಿಡ್ ಮೀಟಿಂಗ್ ಸ್ಥಳ : ಕಾರ್ಯಪಾಲಕ ಇಂಜಿನಿಯರ್, ಲೋಇ ವಿಭಾಗ, ದಾವಣಗೆರೆ. ದಿನಾಂಕ	20.06.2022 ಬೆಳಗ್ಗೆ 11.00 ಗಂಟೆಗೆ
ಟೆಂಡರ್ ಸ್ವೀಕರಿಸಲು ಕೊನೆಯ ದಿ:-	28.06.2022 ಸಂಜೆ 4.00 ಗಂಟೆಯವರೆಗೆ
ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿ:	29.06.2022 ಸಂಜೆ 4.30 ಗಂಟೆಯವರೆಗೆ
ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿ:-	30.06.2022 ಸಂಜೆ 4.30 ಗಂಟೆಯವರೆಗೆ

ಉಳಿದಂತೆ ಟೆಂಡರ್ ಪ್ರಕ್ರಿಯೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ವಿವರಗಳನ್ನು ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನೋಡಿಕೊಳ್ಳಬಹುದಾಗಿದೆ ಹಾಗೂ ಈ ಕಚೇರಿಯನ್ನು ಸಂಪರ್ಕಿಸುವುದು. ದೂರವಾಣಿ ಸಂಖ್ಯೆ : 08192 231530
ಜಾಜಾಇ/ಚಿಇಚೆ/895/ಎಂಸಿಎ/2022-23 ಸಹಿ/- ಕಾರ್ಯಪಾಲಕ ಅಭಿಯಂತರರು

ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ,
ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,
ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ತುಮಕೂರು.
ಸಂಖ್ಯೆ: ಕಾಇ/ಸುರಾಇವಿ/ತುಮ/ಎಇ-1/ಟೆಂಡರ್/2022-23 ದಿನಾಂಕ: 09.06.2022
ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ-07/2022-23
(ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ)
ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಐಟಂವಾರು ಟೆಂಡರ್‌ಗಳನ್ನು KW-1 & KW-2 (ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯುಮೆಂಟ್) ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು KTPP Act 1999 and KTPP Rule 2000 ಹಾಗೂ ಇತ್ತೀಚಿನ ತಿದ್ದುಪಡಿ ನಿಬಂಧನೆಗೊಳಪಟ್ಟಂತೆ ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಹಾಗೂ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ (ಸರ್ಮೋರ್ಸ್‌ಗಾಗಿ 1/1, ಸನ್‌ಬೀಮ್ ಬಿಲ್ಡಿಂಗ್, ಈಗಲ್ ಸ್ಟ್ರೀಟ್, ಲಾಂಗ್‌ಫೋರ್ಡ್ ರೋಡ್, ಲಾಂಗ್‌ಫೋರ್ಡ್ ಟೌನ್, ಬೆಂಗಳೂರು-560 025, ದೂರವಾಣಿ: 080-22485867, 080-22485927) ರಲ್ಲಿ ನೊಂದಾಯಿಸಿದ ಅರ್ಹ (ಸಿವಿಲ್) ಗುತ್ತಿಗೆದಾರರುಗಳಿಂದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ತುಮಕೂರು ವಿಭಾಗ ವ್ಯಾಪ್ತಿಯ ಈ ಕೆಳಗೆ ನಮೂದಿಸಿರುವ2022-23ನೇ ಸಾಲಿನ 5054-ಮುಖ್ಯ ಮಂತ್ರಿ ವಿಶೇಷ ಮಂಜೂರಾತಿ ಅನುದಾನ ಯೋಜನೆಯಡಿ ಕಾಮಗಾರಿಗಳಿಗೆ ಅಲ್ಪಾವಧಿ ಟೆಂಡರ್‌ನ್ನು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ ಆಹ್ವಾನಿಸಲಾಗಿದೆ.
ಟೆಂಡರ್‌ನಲ್ಲಿ ಭಾಗವಹಿಸಲು ಇಚ್ಛಿಸುವ ಅರ್ಹ ಗುತ್ತಿಗೆದಾರರು ವೆಬ್‌ಸೈಟ್ www.eproc.karnataka.gov.in ಮುಖಾಂತರ ದಿನಾಂಕ: 13.06.2022 ರಿಂದ 27.06.2022 ಸಂಜೆ 5.00 ಗಂಟೆವರೆಗೆ ಭಾರಂ ಫೀ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ (ಹಿಂತಿರುಗಿಸಲಾಗುವುದಿಲ್ಲ) ಸಲ್ಲಿಸಿ ನಿಗದಿತ ಇ.ಎಂ.ಡಿ. ಪಾವತಿಸಿ ಟೆಂಡರ್‌ಗಳನ್ನು ಪಡೆಯಬಹುದಾಗಿದೆ ಹಾಗೂ ಸಲ್ಲಿಸಬಹುದಾಗಿದೆ. ಟೆಂಡರ್ ತೆರೆಯುವ ದಿನಾಂಕ: 28.06.2022 ರಂದು ಸಂಜೆ 5.10 ಗಂಟೆ ನಂತರ. ಕಾಮಗಾರಿಗಳ ಸಂಪೂರ್ಣ ವಿವರಗಳನ್ನು www.eproc.karnataka.gov.in ಸಲ್ಲಿ ಲಾಗ್‌ಇನ್ ಆಗುವ ಮುಖಾಂತರ ಹಾಗೂ ಈ ಕೆಳ ಸಹಿದಾರರಿಂದ ಕಚೇರಿ ಕೆಲಸದ ಅವಧಿಯಲ್ಲಿ ಪಡೆಯಬಹುದಾಗಿರುತ್ತದೆ. ದೂರವಾಣಿ ಸಂಖ್ಯೆ: 0816-2272620 ಟೆಂಡರ್‌ಗೆ ಯಾವುದೇ ಮಾರ್ಪಾಟು, ತಿದ್ದುಪಡಿಗಳ ಮಾಹಿತಿಗಳನ್ನು ಇ-ಪೋರ್ಟಲ್ ಮುಖಾಂತರವೇ ಮಾತ್ರ ಪ್ರಕಟಿಸಲಾಗುವುದು.
ಸಹಿ/- ಕಾರ್ಯಪಾಲಕ ಇಂಜಿನಿಯರ್,
ಪಂ.ರಾ.ಇಂ. ವಿಭಾಗ, ತುಮಕೂರು.
DIPR/TUM/193/MCA/2022-23

ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರ
ನಂ.5, 2ನೇ ಮಹಡಿ, ಬೂಸ್ಟರ್‌ಲೇನ್, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-560 009.
ದೂ: 080-22341230/35 ಇ-ಮೇಲ್: bmicapa@gmail.com
ಸಂಖ್ಯೆ : ಬಿಎಂಐಸಿಎಪಿಎ/ಭೂಸಾಬ-01/47/2021-22 ದಿನಾಂಕ: 08.06.2022
ಸಾರ್ವಜನಿಕ ಪ್ರಕಟಣೆ
[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 14(ಎ)ರ ಪ್ರಕಾರ]
ಶ್ರೀ ಕೆ.ಸಂಜೀವಪ್ಪ ಮತ್ತು ಶ್ರೀಮತಿ ಗೌರಮ್ಮ ಎಸ್. ಇವರು ಬೆಂಗಳೂರು ದಕ್ಷಿಣ ತಾಲ್ಲೂಕು, ತಾವರೆಕೆರೆ ಹೋಬಳಿ, ದೊಡ್ಡೇರಿ ಗ್ರಾಮದ ಸರ್ವೆ ಸಂಖ್ಯೆ : 21/2ರಲ್ಲಿ 0ಎ-38½ಗು (0ಎ-1ಗು 'ಅ' ಖರಾಬು ಸೇರಿ) ಮತ್ತು ಸರ್ವೆ ಸಂಖ್ಯೆ : 21/4ರ 01ಎ-23ಗು (0ಎ-01ಗು 'ಅ' ಖರಾಬು ಸೇರಿ)ಒಟ್ಟು 1ಎ-39½ಗು ವಿಸ್ತೀರ್ಣದ ಪ್ರದೇಶಕ್ಕೆ ಕೆ.ಟಿ.ಸಿ.ಪಿ. ಕಾಯ್ದೆ, 1961ರ ಕಲಂ 14(ಎ) ರಡಿಯಲ್ಲಿ "ವ್ಯವಸಾಯ" ವಲಯದಿಂದ "ವಸತಿ" ಉದ್ದೇಶಕ್ಕೆ ಭೂ ಉಪಯೋಗ ಬದಲಾವಣೆ ಕೋರಿ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸುತ್ತಾರೆ.ಅರ್ಜಿದಾರರು ಸದರಿ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯು ಈ ಕೆಳಕಂಡ ಸಾರ್ವಜನಿಕ ಹಿತಾಸಕ್ತಿ ಹೊಂದಿರುವುದಾಗಿ ತಿಳಿಸಿರುತ್ತಾರೆ.
1) ಈ ಜಮೀನಿನಲ್ಲಿ ಬದಲಾವಣೆ ಅಭಿವೃದ್ಧಿಪಡಿಸುವುದರಿಂದ ಬಡವರು, ಮಧ್ಯಮ ವರ್ಗದವರಿಗೆ ಯೋಗ್ಯ ಬೆಲೆಯಲ್ಲಿ ನಿವೇಶನಗಳು ದೊರಕುತ್ತವೆ.
2) ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವಾಗ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತವೆ.
3) ಈ ವಿನ್ಯಾಸದ ಅಭಿವೃದ್ಧಿಯಿಂದ ಸುತ್ತಲಿನ ಪ್ರದೇಶ ಅಭಿವೃದ್ಧಿ ಹೊಂದುತ್ತವೆ.
4) ಯೋಜನಾ ಬದ್ಧವಾದ ವಿನ್ಯಾಸ ರಚನೆಯಿಂದ ನಾಗರಿಕ ಸೌಲಭ್ಯಗಳಾದ ಉತ್ತಮ ರಸ್ತೆಗಳು ಮತ್ತು ಉದ್ಯಾನವನಗಳು ಸಾರ್ವಜನಿಕರ ಉಪಯೋಗಕ್ಕೆ ಲಭ್ಯವಾಗುತ್ತವೆ.
ಸದರಿ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯ ಬಗ್ಗೆ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ಅವುಗಳನ್ನು ಈ ಪ್ರಕಟಣೆಯ ದಿನಾಂಕದಿಂದ 16 ದಿವಸಗಳೊಳಗಾಗಿ ಸೂಕ್ತ ಕಾರಣಗಳೊಂದಿಗೆ ಲಿಖಿತವಾಗಿ ಸದಸ್ಯ-ಕಾರ್ಯದರ್ಶಿಗಳು, ಬಿ.ಎಂ.ಐ.ಸಿ.ಎ.ಪಿ.ಎ. ಬೆಂಗಳೂರು ಇವರಿಗೆ ಈ ಪ್ರಕಟಣೆಯಲ್ಲಿನ ಮೇಲ್ಭಾಗದ ವಿಳಾಸಕ್ಕೆ ಸಲ್ಲಿಸಬೇಕೆಂದು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.
ಸಹಿ/-
ಸದಸ್ಯ-ಕಾರ್ಯದರ್ಶಿಗಳು
ಬಿ.ಎಂ.ಐ.ಸಿ.ಎ.ಪಿ.ಎ., ಬೆಂಗಳೂರು.
ಜಾಜಾಸಂಇ/ಚಿಇ/ಜಾಜಾಕ ಅಕ್ಷೇಪ/ಎಂಸಿ/830/2022-23
ಕೋವಿಡ್-19 - ಗಾಳಿಯಲ್ಲಿ ಹರಡುವಿಕೆ, ಜನಸಂದಣಿಯಿಂದಾಗಿ ಪರಿಣಾಮ, ಸೋಂಕನ್ನು ದೂರವಿಡಿ-ಸೋಂಕಿತರನ್ನಲ್ಲ.
ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಕಾರ್ಯಪಾಲಕ ಅಭಿಯಂತರರ ಕಛೇರಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಚಿಕ್ಕಬಳ್ಳಾಪುರ.
Ph No. :